# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 25-10-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

ಹಾಜರಿದ್ದ ಸದಸ್ಯರು,

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ಕಾವ್ಯ ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)

ಹಾಜರಿದ್ದ ಅಧಿಕಾರಿಗಳು

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

ಸಭೆಯ ನಡವಳಿಗಳು

1) ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಬಿಡಿಎ ಬಡಾವಣೆಯಲ್ಲಿ ಎರಡು ಕಡೆ ಚರಂಡಿ ಮೇಲಿನ ಕಾಂಕ್ರೀಟ್ ಸ್ಲಾಬ್‌ಗಳು ಮುರಿದು ಬಿದ್ದಿದ್ದು, ಕೂಡಲೇ ಸರಿಪಡಿಸಲು ಪ್ರಸ್ತಾಪಿಸಿದಾಗ ಸಭೆಯಲ್ಲಿ ಚರ್ಚಿಸಿ, ಮುರಿದು ಬಿದ್ದಿರುವ ಕಾಂಕ್ರೀಟ್ ಸ್ಲಾಬ್‌ಗಳನ್ನು ಅಳವಡಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

2) ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಹೆಚ್.ಬಿ.ಆರ್ ಬಡಾವಣೆಯಲ್ಲಿ ಒಂದು ರಸ್ತೆಗೆ ಸೈನ್ ಬೋರ್ಡ್‌ಅನ್ನು ಅಳವಡಿಸುವ ಬಗ್ಗೆ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಅಭಿಯಂತರರು ಸೈನ್ ಬೋರ್ಡ್‌ಗಳನ್ನು ಅಳವಡಿಸಿಕೊಡುವುದಾಗಿ ಸಭೆಗೆ ತಿಳಿಸಿದರು.

Scanned with CamScanner

3) ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ವಾರ್ಡ್ ಪ್ರದೇಶದ ಅತೀ ಸಂಚಾರ ಇರುವ ರಸ್ತೆಗಳಿಗೆ ವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಅಳವಡಿಸಿಕೊಡಲು ವಿಷಯವನ್ನು ಸಭೆಯಲ್ಲಿ ಪ್ರಸ್ತಾಪಿಸಿದಾಗ ಈ ಬಗ್ಗೆ ಕೂಲಂಕುಷವಾಗಿ ಚರ್ಚಿಸಿ, ಕೂಡಲೇ ಸಂಬಂಧಪಟ್ಟ ವಿಭಾಗಕ್ಕೆ ನೆನಪೋಲೆ ಪತ್ರವನ್ನು ಬರೆಯಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

4) ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಬಿಡಿಎ ಬಡಾವಣೆಯಲ್ಲಿ ಕಸವನ್ನು ಆಟೋ ಟಿಪ್ಪರ್ ಗಳಿಗೆ ಕೊಡದೆ ಅಲ್ಲಲ್ಲಿ ರಸ್ತೆಯ ಪಾದಾಚಾರಿ ಮಾರ್ಗದಲ್ಲಿ ಕಸದ ಚೀಲಗಳನ್ನು ಹಾಕುತ್ತಿದ್ದು, ಇದರಿಂದ ಬ್ಲಾಕ್‌ಸ್ಪಾಟ್‌ಗಳು ನಿರ್ಮಾಣವಾಗುತ್ತಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ ಈ ಬಗ್ಗೆ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಮಾರ್ಷಲ್‌ಗಳಿಗೆ ಕಸವನ್ನು ಪಾದಾಚಾರಿ ಮಾರ್ಗದಲ್ಲಿ ಎಸೆಯುವವರನ್ನು ಗುರುತಿಸಿ, ದಂಡ ವಿಧಿಸಲು ಹಾಗೂ ಈ ಬಗ್ಗೆ ಪರಿಶೀಲಿಸಲು ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

5) ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಹೆಚ್.ಬಿ.ಆರ್ ಪ್ರದೇಶದಲ್ಲಿ ಸಾರ್ವಜನಿಕರ ಗುರುತಿನ ಚೀಟಿಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಹಾಗೂ ಮತದಾರರ ಪಟ್ಟಿಗೆ ಹೊಸದಾಗಿ ಸೇರಿಸಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಂದಾಯ ನಿರೀಕ್ಷಕರು ಮಾತನಾಡಿ, ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಲಾಗುವುದು ಎಂದು ಸಭೆಗೆ ತಿಳಿಸಿದರು.

6) ಡಾ|| ಕಾವ್ಯ ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ವಾರ್ಡ್ ಕಛೇರಿಯ ಆಸ್ಪತ್ರೆಯಲ್ಲಿ ಕೋವಿಡ್–19 ಪರೀಕ್ಷೆಗಳನ್ನು ಸತತವಾಗಿ ನಡೆಸುತ್ತಿದ್ದು, ಒಟ್ಟು 06 ಸಕ್ರಿಯ ಪ್ರಕರಣಗಳಲ್ಲಿ 05 ಹೋಮ್ ಐಸೋಲೇಷನ್, 01 ಜನ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಪರೀಕ್ಷೆ ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 41402 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು<br>ಸಹಾಯಕ ಅಭಿಯಂತರರು<br>ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ | Prasanna kumar. A<br>ಅಧ್ಯಕ್ಷರು<br>(ನೋಡೆಲ್ ಅಧಿಕಾರಿಗಳು)<br>ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ |

ಪ್ರತಿಯನ್ನು

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner